# All India Radio: Bangalore
# Regional Bulletin In Kannada
# 04.02.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 04.02.2026 / 2.30 p.m.

<><><><>

ಮುಖ್ಯಾಂಶಗಳು

1. ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆಗೆ ಪ್ರತಿಪಕ್ಷಗಳ ಪಟ್ಟು ; ಬಿಜೆಪಿ-ಜೆಡಿಎಸ್ ಅಹೋರಾತ್ರಿ ಧರಣಿ
2. ಸಿ.ಟಿ.ರವಿ ಕ್ಷಮೆಯಾಚನೆಗೆ ಪರಿಷತ್‌ನಲ್ಲಿ ಆಗ್ರಹ - ಪ್ರತಿಪಕ್ಷಗಳ ವಿರುದ್ಧ ಕಾನೂನು ಸಚಿವ ಎಚ್.ಕೆ.ಪಾಟೀಲ್ ಅಸಮಾಧಾನ
3. ರಾಜ್ಯಕ್ಕೆ ೮೦೦ ಕೋಟಿಗೂ ಅಧಿಕ ಹಣ ಬಾಕಿ ; ಬಿಡುಗಡೆ ಮಾಡುವಂತೆ ರಾಜ್ಯಸಭೆಯಲ್ಲಿ ಸಯ್ಯದ್ ನಾಸೀರ್ ಹುಸೇನ್ ಆಗ್ರಹ
4. ಬೆಳಗಾವಿಯ ವಂಟಮೂರಿಯಲ್ಲಿ ಮಹಿಳೆ ವಿವಸ್ತ್ರ ಪ್ರಕರಣ- ೧೨ ಆರೋಪಿಗಳಿಗೆ ಜೈಲು ಶಿಕ್ಷೆ ಪ್ರಕಟಿಸಿದ ನ್ಯಾಯಾಲಯ
5. ಇಂದು ವಿಶ್ವ ಕ್ಯಾನ್ಸರ್ ದಿನ ; ರಾಜ್ಯದೆಲ್ಲೆಡೆ ಆರೋಗ್ಯ ಇಲಾಖೆಯಿಂದ ಜಾಗೃತಿ

<><><><>

ವಿಧಾನಸಭೆಯಲ್ಲಿಂದು ಕಲಾಪ ಆರಂಭವಾಗುತ್ತಿದ್ದಂತೆ ಅಹೋರಾತ್ರಿ ಧರಣಿಯಲ್ಲಿ ನಿರತರಾದ ಪ್ರತಿಪಕ್ಷ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಅಬಕಾರಿ ಇಲಾಖೆಯಲ್ಲಿ ೬ ಸಾವಿರ ಕೋಟಿ ರೂಪಾಯಿ ಹಗರಣವಾಗಿದೆ. ರಾಜ್ಯ ಖಜಾನೆಗೆ ಬರಬೇಕಾದ ಹಣ ಭ್ರಷ್ಟಾಚಾರದ ಮೂಲಕ ಸೋರಿಕೆಯಾಗಿದೆ. ನೈತಿಕ ಹೊಣೆ ಹೊತ್ತು ಅಬಕಾರಿ ಸಚಿವರು ರಾಜೀನಾಮೆ ನೀಡುವಂತೆ ಆಗ್ರಹಿಸಿದರು. ಈ ವೇಳೆ ಕಾಂಗ್ರೆಸ್‌ನ ಶಿವಲಿಂಗೇಗೌಡ ಮಧ್ಯ ಪ್ರವೇಶಿಸಿ ಮಾತನಾಡಿ, ಪ್ರತಿಪಕ್ಷಗಳ ಆರೋಪ ಸುಳ್ಳಾಗಿದ್ದು, ಘೋಷಣೆ ಕೂಗುತ್ತಿರುವ ಸದಸ್ಯರನ್ನು ಹೊರಹಾಕಿ ಸದನ ಸರಾಗವಾಗಿ ನಡೆಯಲು ಅವಕಾಶ ನೀಡಿ ಎಂದು ಒತ್ತಾಯಿಸಿದರು. ಸಭ್ಯಾಧ್ಯಕ್ಷ ಸ್ಥಾನದಲ್ಲಿ ಉಪಸ್ಥಿತರಿದ್ದ ಉಪಸಭಾಪತಿ ರುದ್ರಪ್ಪ ಲಮಾಣಿ

ಮಾತನಾಡಿ, ಸದನ ಸುಗಮವಾಗಿ ನಡೆಯಲು ಅವಕಾಶ ನೀಡುವಂತೆ ಮನವಿ ಮಾಡಿದರು. ಪ್ರತಿಪಕ್ಷಗಳ ಧರಣಿ, ಘೋಷಣೆ, ಗದ್ದಲದ ನಡುವೆ ಸದಸ್ಯ ಶರತ್ ಬಚ್ಚೇಗೌಡ ೪೫ ನಿಮಿಷಗಳ ಕಾಲ ವಿಕಸಿತ ಭಾರತ ಜಿ-ರಾಮ್-ಜಿ ನಿರ್ಣಯದ ಚರ್ಚೆಯ ಮೇಲೆ ಮಾತನಾಡಿದರು. ಇದೇ ವೇಳೆ ಕಾಂಗ್ರೆಸ್‌ನ ಶಿವಲಿಂಗೇಗೌಡ ಅವರು, ಧರಣಿ ನಿರತ ಪ್ರತಿಪಕ್ಷ ಸದಸ್ಯರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಘಟನೆಯೂ ನಡೆಯಿತು. ಬಳಿಕ ಸಭಾಧ್ಯಕ್ಷರು, ಸದನವನ್ನು ೧೦ ನಿಮಿಷಗಳ ಕಾಲ ಮುಂದೂಡಿದರು.

<><><>

ವಿಧಾನಪರಿಷತ್‌ನಲ್ಲಿಂದು ಬಿಜೆಪಿ ಸದಸ್ಯ ಸಿ.ಟಿ.ರವಿ, ತಾವು ಆಡಿರುವ ಆಕ್ಷೇಪಾರ್ಹ ಮಾತುಗಳಿಗೆ ವಿಷಾದ ವ್ಯಕ್ತಪಡಿಸಬೇಕು ಎಂದು ಆಡಳಿತ ಪಕ್ಷದ ಸದಸ್ಯರು ಒತ್ತಾಯಿಸಿದರು. ಕಲಾಪ ಸುಗಮವಾಗಿ ನಡೆಯಬೇಕು ಎಂದಾದರೆ ಸಿ.ಟಿ.ರವಿ, ವಿಷಾದ ವ್ಯಕ್ತಪಡಿಸಬೇಕು ಎಂದು ಪಟ್ಟು ಹಿಡಿದರು. ಈ ವೇಳೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಿ.ಟಿ.ರವಿ ಅವರು, ಬಳಸಿದ್ದು, ಅಸಂವಿಧಾನಿಕ ಪದ ಅಲ್ಲ ಎಂದು ಸಮರ್ಥಿಸಿಕೊಂಡರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಮಧ್ಯ ಪ್ರವೇಶಿಸಿ ಮಾತನಾಡಿ, ಐದು ಬಾರಿ ಪೀಠ ಮಾರ್ಗದರ್ಶನ ನೀಡಿದೆ. ಇಬ್ಬರು ಸಭಾಪತಿಗಳು ವಿಷಾದ ವ್ಯಕ್ತಪಡಿಸುವಂತೆ ತಿಳಿಸಿದ್ದಾರೆ. ಎಲ್ಲದಕ್ಕೂ ಶಿಷ್ಟಾಚಾರವಿದೆ ಎಂದು ಪ್ರತಿಪಕ್ಷ ಸದಸ್ಯರು ವಿರುದ್ಧ ಅಸಮಾಧಾನ ಹೊರಹಾಕಿದರು.

<><><>

ವಿಧಾನ ಪರಿಷತ್ತಿನಲ್ಲಿಂದು ಇಬ್ಬರು ಸದಸ್ಯರು ಸರ್ಕಾರಿ ಅಧಿಕಾರಿಗಳ ವಿರುದ್ಧ ಹಕ್ಕುಚ್ಯುತಿ ಮಂಡನೆ ಮಾಡಿ ಗಮನ ಸೆಳೆದರು. ಸಭಾಪತಿ ಬಸವರಾಜ ಹೊರಟ್ಟಿ ಅವರು, ಮೊದಲಿಗೆ ಸದನದ ಕಾರ್ಯ ಕಲಾಪ ಕೈಗೆತ್ತಿಕೊಳ್ಳುತ್ತಿದ್ದಂತಯೇ ಕಾಂಗ್ರೆಸ್ ಸದಸ್ಯ ರಮೇಶ್ ಹಕ್ಕುಚ್ಯುತಿ ಮಂಡಿಸಿ ಚಿಕ್ಕನಾಯಕನಹಳ್ಳಿ ನೋಡೆಲ್ ತಾಲ್ಲೂಕು ತಹಶೀಲ್ದಾರ್ ಹಾಗೂ ಅಧಿಕಾರಿಗಳು ತಮ್ಮನ್ನು ಸರ್ಕಾರಿ ಕಾರ್ಯಕ್ರಮಕ್ಕೆ ಆಹ್ವಾನಿಸಿಲ್ಲ. ಒಂದು ಆಹ್ವಾನ ಪತ್ರಿಕೆಯನ್ನೂ ನೀಡಲ್ಲ. ಇದರಿಂದ ನನ್ನ ಹಕ್ಕುಚ್ಯುತಿ ಆಗಿದೆ. ಈ ಸಂಬಂಧಿಸಿದಂತೆ ಕಾನೂನು ರೀತಿಯಾಗಿ ಕ್ರಮ ಕೈಗೊಳ್ಳುವಂತೆ ಸಭ್ಯಾಧ್ಯಕ್ಷರ ಪೀಠಕ್ಕೆ ಮನವಿ ಮಾಡಿದರು. ಬಳಿಕ ಸಭಾಪತಿ ಬಸವರಾಜ ಹೊರಟ್ಟಿ ಅವರು, ಈ ಪ್ರಕರಣವನ್ನು ಹಕ್ಕುಬಾದ್ಯತಾ ಸಮಿತಿಗೆ ವಹಿಸಲಾಗಿದೆ ಎಂದು

ಪ್ರಕಟಿಸಿದರು. ಸದಸ್ಯ ಚಿದಾನಂದಗೌಡ ಪ್ರಸ್ತಾಪಿಸಿ, ಶಿರಾದಲ್ಲಿ ನನ್ನ ಅನುದಾನದಲ್ಲಿ ಶಾಲೆ ಕಟ್ಟಡ ನಿರ್ಮಾಣ ಮಾಡಲಾಗಿದೆ. ಸರಾಸರಿ ಅಧಿಕ ಮೊತ್ತವೇ ಖರ್ಚು ಮಾಡಿ ನಿರ್ಮಿಸಲಾಗಿದೆ. ಆದರೆ, ಉದ್ಘಾಟನಾ ಕಾರ್ಯಕ್ರಮಕ್ಕೆ ಯಾವೊಬ್ಬ ಅಧಿಕಾರಿಗಳು ಭಾಗವಹಿಸಿಲ್ಲ. ಜಿಲ್ಲಾಧಿಕಾರಿಯೂ ನಿರ್ದೇಶನ ನೀಡಿಲ್ಲ. ಈ ಕುರಿಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಆಗ ಪೀಠದಲ್ಲಿದ್ದ ಸಭಾಪತಿ ಹೊರಟ್ಟಿ ಅವರು, ಅರ್ಜಿ ನೀಡಿದರೆ ಹಕ್ಕು ಬಾಧ್ಯತಾ ಸಮಿತಿಗೆ ನೀಡಲಾಗುವುದು ಎಂದು ಸೂಚಿಸಿದರು.

<><><>

ಸದನದಲ್ಲಿ ಮನ್ರೇಗಾ ಬಗ್ಗೆ ಚರ್ಚೆ ನಡೆಯದಂತೆ ತಡೆಯಲು ಬಿಜೆಪಿ ನಾಯಕರು ನಾಟಕ ಮಾಡುತ್ತಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಕಸಿತ ಭಾರತ ಜಿ-ರಾಮ್-ಜಿ ಬಗ್ಗೆ ಸಮರ್ಥಿಸಿಕೊಳ್ಳಲು ಬಿಜೆಪಿ ನಾಯಕರಿಗೆ ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನೂತನ ಕಾಯ್ದೆ ಬಗ್ಗೆ ಬಿಜೆಪಿ ನಾಯಕರು ಚರ್ಚೆ ಮಾಡಲಿ ಎಂದು ಸವಾಲು ಹಾಕಿದ್ದಾರೆ. ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿಯೂ ಈ ಕಾಯ್ದೆ ಜಾರಿ ಅಸಾಧ್ಯ ಎಂದು ತಿಳಿಸಿದ್ದಾರೆ.

<><><>

೧೫ನೇ ಹಣಕಾಸು ಆಯೋಗದಡಿಯಲ್ಲಿ ರಾಜಕೀಯ ಮೀಸಲಾದ ೮ ಸಾವಿರ ಕೋಟಿಗೂ ಹೆಚ್ಚು ಅನುದಾನವನ್ನು ಕೇಂದ್ರ ಸರ್ಕಾರ ಬಾಕಿ ಉಳಿಸಿಕೊಂಡಿದೆ ಎಂದು ರಾಜ್ಯಸಭೆಯಲ್ಲಿಂದು ಸಂಸದ ಸಯ್ಯದ್ ನಾಸೀರ್ ಹುಸೇನ್ ಪ್ರಸ್ತಾಪಿಸಿದ್ದಾರೆ. ಶೂನ್ಯ ವೇಳೆಯಲ್ಲಿ ಮಾತನಾಡಿದ ಅವರು, ಆರು ಸಾವಿರ ಗ್ರಾಮ ಪಂಚಾಯಿತಿಗಳಿಗೆ ಮೀಸಲಾದ ೨ ಸಾವಿರದ ೧೩೩ ಕೋಟಿ ರೂಪಾಯಿ, ನರೇಗಾ ಯೋಜನೆಯಡಿಯಲ್ಲಿ ೧ ಸಾವಿರದ ೭೭ ಕೋಟಿ ರೂಪಾಯಿ ಹಾಗೂ ಜಲಜೀವನ್ ಮಿಷನ್ ಅಡಿಯಲ್ಲಿ ೭ ಸಾವಿರದ ೯೬೭ ಕೋಟಿ ರೂಪಾಯಿ ಬಾಕಿ ಉಳಿಸಿಕೊಂಡಿದೆ ಎಂದು ಹೇಳಿದ್ದಾರೆ. ಹಣ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ಪಂಚಾಯಿತಿಗಳು, ನೈರ್ಮಲ್ಯ ಕಾರ್ಮಿಕರು ಮತ್ತು ಸ್ಥಳೀಯ ಆಡಳಿತ ಸಿಬ್ಬಂದಿ ಸೇರಿದಂತೆ ಅಗತ್ಯ ಸಿಬ್ಬಂದಿಗೆ ವೇತನ ಪಾವತಿಸಲು ಸಾಧ್ಯವಾಗುತ್ತಿಲ್ಲ ಎಂದು ಕೇಂದ್ರ ಸರ್ಕಾರದ ಗಮನ ಸೆಳೆದರು.

<><><>

ದೇಶದ ಗಮನ ಸೆಳೆದಿದ್ದ ಬೆಳಗಾವಿ ತಾಲೂಕಿನ ವಂಟಮೂರಿ ಗ್ರಾಮದಲ್ಲಿ ಮಹಿಳೆಯೋರ್ವಳಿಗೆ ವಿಸ್ತ್ರಗೊಳಿಸಿ ಹಲ್ಲೆ ನಡೆಸಿದ ಆರೋಪಿಗಳಿಗೆ ಬೆಳಗಾವಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೈಲು ಶಿಕ್ಷೆ ವಿಧಿಸಿ ಇಂದು ತೀರ್ಪು ಪ್ರಕಟಿಸಿದೆ. ೧೨ ಆರೋಪಿಗಳಿಗೆ ತಲಾ ಐದು ವರ್ಷ ಶಿಕ್ಷೆ ವಿಧಿಸಲಾಗಿದೆ. ನ್ಯಾಯಾಧೀಶ ಎಸ್.ಎಸ್. ಮಂಜುನಾಥ್, ಆರೋಪಿಗಳಿಗೆ ಶಿಕ್ಷೆ ಹಾಗೂ ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ.

<><><>

ಇಂದು ವಿಶ್ವ ಕ್ಯಾನ್ಸರ್ ದಿನ. ಕ್ಯಾನ್ಸರ್ ಬಗ್ಗೆ ಸಾರ್ವಜನಿಕರಲ್ಲಿ ಇರುವ ತಪ್ಪು ಕಲ್ಪನೆಗಳ ವಿರುದ್ಧ ಜಾಗೃತಿ ಮೂಡಿಸುವುದೇ ಈ ದಿನದ ಮುಖ್ಯ ಉದ್ದೇಶವಾಗಿದೆ. ಇಂದಿನ ದಿನಗಳಲ್ಲಿ ಯುವಜನರಲ್ಲಿ ಹೆಚ್ಚಾಗಿ ಕ್ಯಾನ್ಸರ್ ಕಂಡು ಬರುತ್ತಿದ್ದು, ಕಳವಳಕಾರಿ ಸಂಗತಿಯಾಗಿದೆ. ದಾವಣಗೆರೆಯಲ್ಲಿಂದು ರೋಟರಿ ಕ್ಲಬ್ ಹಾಗೂ ವಿವಿಧ ಸಂಶೋಧಾನ ಸಂಸ್ಥೆಗಳ ಸಹಯೋಗದಲ್ಲಿ ವಾಕಥಾನ್ ನಡೆಯಿತು. ವಾಕಥಾನ್‌ಗೆ ಚಾಲನೆ ನೀಡಿದ ಜಿಲ್ಲಾ ಆರೋಗ್ಯ ಅಧಿಕಾರಿ ಷಣ್ಮುಖಪ್ಪ ಮಾತನಾಡಿ, ಪ್ರತಿವರ್ಷ ಫೆಬ್ರವರಿ ೪ರಂದು ವಿಶ್ವ ಕ್ಯಾನ್ಸರ್ ದಿನವನ್ನಾಗಿ ಆಚರಿಸಲಾಗುತ್ತದೆ. ಈ ವರ್ಷ ಯುನೈಟೆಡ್ ಬೈ ಯುನಿಕ್ ಘೋಷವಾಕ್ಯದೊಂದಿಗೆ ಕಾರ್ಯಕ್ರಮ ನಡೆಯುತ್ತಿದೆ ಎಂದು ಹೇಳಿದರು. ಸಾರ್ವಜನಿಕರಲ್ಲಿ ಕ್ಯಾನ್ಸರ್ ತಡೆಗಟ್ಟುವ ಜೀವನಶೈಲಿ ಮತ್ತು ತಪಾಸಣೆಯ ಬಗ್ಗೆ ಅರಿವು ಮೂಡಿಸುವುದು ಹಾಗೂ ರೋಗಿಗಳಲ್ಲಿ ಆತ್ಮಸ್ಥೈರ್ಯ ತುಂಬುವುದು ಈ ಜಾಥಾದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

<><><>

ಅಬಕಾರಿ ಇಲಾಖೆಯಲ್ಲಿ ೬ ಕೋಟಿ ರೂಪಾಯಿ ಹಗರಣ ನಡೆದಿದ್ದು, ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ವಿಧಾನಸೌಧದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜೀನಾಮೆ ನೀಡದಿದ್ದರೆ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಅಬಕಾರಿ ಸಚಿವರು ಪ್ರತಿ ತಿಂಗಳು ಕೋಟಿ ಕೋಟಿ ವಸೂಲಿ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ. ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು, ಅಬಕಾರಿ ಸಚಿವರ ರಾಜೀನಾಮೆಗೆ ಆಗ್ರಹಿಸಿ ಕಳೆದ ರಾತ್ರಿ ಅಹೋರಾತ್ರಿ ಧರಣಿ ನಡೆಸಿದ್ದಾರೆ.

<><><>

ಕೇಂದ್ರ ಸರ್ಕಾರ ಪದ್ಮಶ್ರೀ ಪ್ರಶಸ್ತಿ ನೀಡಿರುವುದಕ್ಕೆ ಸುಮಂಗಲಿ ಆಶ್ರಮದ ಮುಖ್ಯಸ್ಥರಾದ ಸುಶೀಲಮ್ಮ ಸಂತಸ ವ್ಯಕ್ತಪಡಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಈ ಪ್ರಶಸ್ತಿಯಿಂದ ತಮ್ಮ ಸೇವೆಯನ್ನು ಇನ್ನಷ್ಟು ಹೆಚ್ಚಿಸಬೇಕೆಂಬ ಒಲವು ಹೆಚ್ಚಿದೆ ಎಂದು ಹೇಳಿದ್ದಾರೆ. ಪ್ರಶಸ್ತಿಗೆ ಆಯ್ಕೆ ಮಾಡಿದ ಎಲ್ಲರಿಗೂ ಧನ್ಯವಾದ ತಿಳಿಸಿದ್ದಾರೆ.

ಧ್ವನಿ : ಸುಶೀಲಮ್ಮ (೩೧ ಸೆಕೆಂಡ್‌ಗಳು)

<><><><>

೩೭ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಮಾಸಾಚರಣೆ-೨೦೨೬ರ ಅಂಗವಾಗಿ ಮಂಡ್ಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಬೃಹತ್ ಕಾಲ್ನಡಿಗೆ ಜಾಥಾ ಮತ್ತು ಸೈಕಲ್ ಜಾಥಾಗೆ ಜಿಲ್ಲಾಧಿಕಾರಿ ಡಾ.ಕುಮಾರ ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>